# Karnataka Examinations Authority

18th Cross, Sampige Road, Malleshwaram, Bangalore – 560 012.

## 2018–19 ಪ್ರವೇಶಾತಿ ಪ್ರಕಟಣೆ

**2018–19ನೇ** ಸಾಲಿನ ಈ ಕೆಳಕಂಡ ಅರೆವೈದ್ಯಕೀಯ ಕೋರ್ಸ್‌ಗಳಿಗೆ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯ, ಜಿಲ್ಲಾ ಆಸ್ಪತ್ರೆ ಹಾಗೂ ರಾಜ್ಯದಲ್ಲಿನ ವಿವಿಧ ಖಾಸಗಿ ಪ್ಯಾರಾ ಮೆಡಿಕಲ್ ಸಂಸ್ಥೆಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ಅರ್ಹ ಅಭ್ಯರ್ಥಿಗಳಿಂದ **ಆನ್–ಲೈನ್** ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ.ಸಂ | ಕೋರ್ಸ್‌ನ ಹೆಸರು |
|---|---|
| 01 | ಡಿಪ್ಲೋಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ |
| 02 | ಡಿಪ್ಲೋಮಾ ಇನ್ ಮೆಡಿಕಲ್ ಎಕ್ಸ್‌ರೇ ಟೆಕ್ನಾಲಜಿ |
| 03 | ಡಿಪ್ಲೋಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ |
| 04 | ಡಿಪ್ಲೋಮಾ ಇನ್ ಮೆಡಿಕಲ್ ರೆಕಾರ್ಡ್ಸ್ ಟೆಕ್ನಾಲಜಿ |
| 05 | ಡಿಪ್ಲೋಮಾ ಇನ್ ಡಯಾಲಿಸಿಸ್ ಟೆಕ್ನಾಲಜಿ |
| 06 | ಡಿಪ್ಲೋಮಾ ಇನ್ ಆಪರೇಷನ್ ಥಿಯೇಟರ್ ಟೆಕ್ನಾಲಜಿ |
| 07 | ಡಿಪ್ಲೋಮಾ ಇನ್ ಆಪ್ತಾಲ್ಮಿಕ್ ಟೆಕ್ನಾಲಜಿ |
| 08 | ಡಿಪ್ಲೋಮಾ ಇನ್ ಡೆಂಟಲ್ ಮೆಕ್ಯಾನಿಕ್ |
| 09 | ಡಿಪ್ಲೋಮಾ ಇನ್ ಡೆಂಟಲ್ ಹೈಜೀನ್ |

**ಕನಿಷ್ಠ ವಿದ್ಯಾರ್ಹತೆ: (1)** ಎಲ್ಲಾ ಕೋರ್ಸ್‌ಗಳಿಗೆ ಪಿ.ಯು.ಸಿ. (ವಿಜ್ಞಾನ)/ ತತ್ಸಮಾನ ಪರೀಕ್ಷೆ (ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ) ವಿಷಯಗಳನ್ನು ತೆಗೆದುಕೊಂಡು ತೇರ್ಗಡೆ ಹೊಂದಿರಬೇಕು ಅಥವಾ ಡಿಪ್ಲೋಮ ಇನ್ ಪ್ಯಾರಾ ಮೆಡಿಕಲ್ ಕೋರ್ಸ್‌ಸ್ ಉತ್ತೀರ್ಣರಾಗಿರಬೇಕು. **(2)** ಎಸ್.ಎಸ್.ಎಲ್.ಸಿ./ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಮೇಲೆ ತಿಳಿಸಿರುವ 9 ಕೋರ್ಸ್‌ಗಳಿಗೂ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. **(3)** ಡಿಪ್ಲೋಮಾ ಇನ್ ಮೆಡಿಕಲ್ ರೆಕಾರ್ಡ್ಸ್ ಟೆಕ್ನಾಲಜಿ ಕೋರ್ಸ್‌ಗೆ ಪಿ.ಯು.ಸಿ. (ಸೈನ್ಸ್, ಕಾಮರ್ಸ್, ಆರ್ಟ್ಸ್), ಡಿಪ್ಲೋಮ ಇನ್ ಪ್ಯಾರಾ ಮೆಡಿಕಲ್ ಕೋರ್ಸ್‌ಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿದವರು ಅಥವಾ ಎಸ್.ಎಸ್.ಎಲ್.ಸಿ ತೇರ್ಗಡೆ. **(4)** ಅರ್ಜಿದಾರರು 1 ರಿಂದ 10ನೇ ತರಗತಿ ಅಥವಾ ಪಿಯುಸಿ ಯವರೆಗೆ **ಕನಿಷ್ಠ 07 ವರ್ಷಗಳು ಕರ್ನಾಟಕದಲ್ಲಿ ವಿದ್ಯಾಭ್ಯಾಸ ಮಾಡಿರಬೇಕು**. ಇದಕ್ಕೆ ಸಂಬಂಧಿಸಿದ ದೃಢೀಕರಣ ಪ್ರತಿಯನ್ನು ಅರ್ಜಿಯೊಂದಿಗೆ ಸಲ್ಲಿಸುವುದು. ಅರ್ಜಿಯೊಂದಿಗೆ ಲಗತ್ತಿಸಿರುವ **ವ್ಯಾಸಂಗ ಪ್ರಮಾಣ ಪತ್ರ ಮತ್ತು ಇತರೆ ದಾಖಲೆಗಳ ಮೂಲ ಪ್ರತಿಗಳನ್ನು ಕಡ್ಡಾಯವಾಗಿ ಕೌನ್ಸಿಲಿಂಗ್‌ಗೆ ಹಾಜರಾಗುವ ಸಮಯದಲ್ಲಿ ಸಲ್ಲಿಸುವುದು; ತಪ್ಪಿದಲ್ಲಿ ಕೌನ್ಸಿಲಿಂಗ್‌ಗೆ ಅವಕಾಶ ನೀಡಲಾಗುವುದಿಲ್ಲ**.

**ಕೋರ್ಸಿನ ಅವಧಿ:** 1. ಪಿ.ಯು.ಸಿ ಮತ್ತು ಪಿ.ಎಂ.ಬಿ ಡಿಪ್ಲೋಮ ಅಭ್ಯರ್ಥಿಗಳಿಗೆ 2 ವರ್ಷಗಳು + 6 ತಿಂಗಳು ಇಂಟರ್‌ನ್‌ಶಿಪ್
2. ಎಸ್.ಎಸ್.ಎಲ್.ಸಿ. ಅಭ್ಯರ್ಥಿಗಳಿಗೆ 3 ವರ್ಷಗಳು + 6 ತಿಂಗಳು ಇಂಟರ್‌ನ್‌ಶಿಪ್.

**ವಯೋಮಿತಿ**: ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಗರಿಷ್ಠ 35 ವರ್ಷಗಳು, ಪ.ಜಾ/ಪ.ಪಂ. ಹಾಗೂ ಸೇವಾನಿರತ ಅಭ್ಯರ್ಥಿಗಳಿಗೆ 40 ವರ್ಷಗಳು ಮೀರಿರಬಾರದು.

**ಅರ್ಜಿ ನಮೂನೆಗಳು**: ಮಂಡಳಿಯ ಜಾಲತಾಣ www.kea.kar.nic.in ದಲ್ಲಿ ಲಭ್ಯವಿದ್ದು ಎಲ್ಲಾ ವಿದ್ಯಾರ್ಥಿಗಳು ಆನ್–ಲೈನ್ ಮೂಲಕ ಅರ್ಜಿಯನ್ನು ತುಂಬಬೇಕಾಗಿರುತ್ತದೆ.

**ಅರ್ಜಿಶುಲ್ಕ**: ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ರೂ.250/– ಪರಿಶಿಷ್ಠ ಜಾತಿ/ ಪಂಗಡ/ ಪ್ರವರ್ಗ–1 ರ ಅಭ್ಯರ್ಥಿಗಳಿಗೆ ರೂ.50/–

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: ದಿನಾಂಕ**: 10.08.2018 ರವರೆಗೆ ಅರ್ಜಿಯು ಜಾಲತಾಣದಲ್ಲಿ ಲಭ್ಯವಿರುತ್ತದೆ. ಆನಂತರ ಯಾವುದೇ ಕಾರಣಕ್ಕೂ ಆಫ್–ಲೈನ್ ಮೂಲಕ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಅಭ್ಯರ್ಥಿಗಳ ಆಯ್ಕೆ:** ಅಭ್ಯರ್ಥಿಗಳನ್ನು ಅವರು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳ ಮತ್ತು ಪ್ರವರ್ಗಗಳ ಆಧಾರದ ಮೇರೆಗೆ ಆಯ್ಕೆ ಮಾಡಲಾಗುವುದು. ಕೌನ್ಸಿಲಿಂಗ್ ನಡೆಯುವ ದಿನಾಂಕವನ್ನು ಅಭ್ಯರ್ಥಿಗಳಿಗೆ www.kea.kar.nic.in ಜಾಲತಾಣದಲ್ಲಿ ಪ್ರಕಟಿಸಲಾಗುವುದು.

**ಸೂಚನೆ:– ಅರ್ಜಿದಾರರು ಯಾವುದೇ ದಾಖಲಾತಿಗಳನ್ನು ಆನ್‌ಲೈನ್ ಮೂಲಕ ಅಪ್ಲೋಡ್ ಮಾಡುವಂತಿಲ್ಲ, ಆದರೆ ಸಂದರ್ಶನದ ವೇಳೆಎಲ್ಲಾ ಮೂಲದಾಖಲಾತಿಗಳನ್ನು ಕಡ್ಡಾಯವಾಗಿ ಹಾಜರಿ ಪಡಿಸತಕ್ಕದ್ದು.**

–ಸಹಿ/–

ಕಾರ್ಯನಿರ್ವಾಹಕ ನಿರ್ದೇಶಕರು